## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಆನಂದಕುಮಾರ್, ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ, ರವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ ಹೊರಡಿಸುವ ಕುರಿತು – ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/418/ಗ್ರಾಪಂಕಾ/2017, ದಿನಾಂಕ:19.05.2017.
2. ಅಪರ ನಿಬಂಧಕರು ವಿಚಾರಣೆಗಳು-11, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE/748/2017/ARE-11, ದಿನಾಂಕ:30.11.2018
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE/748/2017/ARE-11, ದಿನಾಂಕ:03.12.2018.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಆನಂದಕುಮಾರ್, ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು-11, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ":**

"ಶ್ರೀ ಆನಂದಕುಮಾರ್, ಹಿಂದಿನ ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ, ರವರ ಆದ ನೀವು ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸಿಕೊಂಡಿದ್ದ ಅವಧಿಯಲ್ಲಿ 2012-13ನೇ ಸಾಲಿನ ತೆರಿಗೆ ಡಿಮ್ಯಾಂಡ್ ರಿಜಿಸ್ಟರಿನಲ್ಲಿ ಶಿರಾ ತಾಲ್ಲೂಕಿನ ಬ್ರಹ್ಮಸಂದ್ರ ಗ್ರಾಮದಲ್ಲಿನ ನಿವೇಶನದ ಖಾತೆ ಸಂಖ್ಯೆ:120, 122 ಮತ್ತು 138 ಇವುಗಳು ತಾರಕಾನಂದ ಆಶ್ರಮದ ಹೆಸರಿನಲ್ಲಿದ್ದು, 2014-15ನೇಯ ಸಾಲಿನ ತೆರಿಗೆ ಬೇಡಿಕೆ ರಿಜಿಸ್ಟರಿನಲ್ಲಿ ಖಾತೆ ಸಂಖ್ಯೆ:120 ಮತ್ತು 122 ಶ್ರೀ ತಾರಕನಂದ ಆಶ್ರಮದ ಹೆಸರಿನಲ್ಲಿದ್ದು ಖಾತೆ ಸಂಖ್ಯೆ:138 ಶ್ರೀ ಬಿ.ವಿ.ಸೂರ್ಯನಾರಾಯಣರಾವ್, ಬಿ.ವಿ.ನಾಗೇಂದ್ರಮೂರ್ತಿ ಮತ್ತು ಬಿ.ವಿ.ನರಸಿಂಹಮೂರ್ತಿ ಇವರುಗಳ ಹೆಸರಿನಲ್ಲಿ ಜಂಟಿಯಾಗಿ ಖಾತೆ ಮಾಡಲು ಯಾವುದೇ ದಾಖಲೆಗಳು ಲಭ್ಯವಿಲ್ಲದಿದ್ದರೂ ನಿಯಮಬಾಹಿರವಾಗಿ ದಾಖಲೆಗಳು ಅಲಭ್ಯತೆಯಡಿಯಲ್ಲಿ ಜಂಟಿ ಖಾತೆ ಮಾಡುವುದರ ಮೂಲಕ ಸರ್ಕಾರಿ ನೌಕರರಿಗೆ ತಕ್ಕುದಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆಯಿಂದ ವರ್ತಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು (ನಡತೆ) 1966 ರ ನಿಯಮ 3(1)(i) ಮತ್ತು (iii) ರನ್ವಯ ದುರ್ನಡತೆ ಎಸಗಿರುತ್ತಾರೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಆನಂದಕುಮಾರ್, ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿರುವುದಿಲ್ಲವೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಉಪಲೋಕಾಯುಕ್ತರು ವಿಚಾರಣಾಧಿಕಾರಿಗಳ ವರದಿಯನ್ನು ಅಂಗೀಕರಿಸಿ ಶ್ರೀ ಆನಂದಕುಮಾರ್, ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪದಿಂದ ಮುಕ್ತಗೊಳಿಸಿರುವುದಾಗಿ ಶಿಫಾರಸ್ಸು ಸಲ್ಲಿಸಿರುತ್ತಾರೆ.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಅಪರ ನಿಬಂಧಕರು-11, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಆನಂದಕುಮಾರ್, ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿ, ರವರ ವಿರುದ್ಧ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪಮುಕ್ತರನ್ನಾಗಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/418/ಗ್ರಾಪಂಕಾ/2017,**
**ಬೆಂಗಳೂರು, ದಿನಾಂಕ: 07-02-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಆನಂದಕುಮಾರ್, ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ, ರವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪಮುಕ್ತರನ್ನಾಗಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
8/2/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-11, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ
7. ಶ್ರೀ ಆನಂದಕುಮಾರ್, ಕಾರ್ಯದರ್ಶಿ, ಚಿನ್ನೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.